**All India Radio: Bangalore**
**National Bulletin In Kannada**
**06.09.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.09.2026 1.10 p.m.**

**<><><><>**

ಮುಖ್ಯಾಂಶಗಳು

1. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಅಸ್ಸಾಂಗೆ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
2. ಬಿಹಾರದಲ್ಲಿ ಪ್ರವಾಹ; ೧೧ ಜಿಲ್ಲೆಗಳ ೧೬.೮೫ ಲಕ್ಷ ಜನರು ಸಂಕಷ್ಟದಲ್ಲಿ
3. ನೇಪಾಳ ಪ್ರವಾಹ: ಭಾರತ - ಚೀನಾ ನೆರವಿನೊಂದಿಗೆ ಮುಂದುವರಿದ ರಕ್ಷಣಾ ಕಾರ್ಯಾಚರಣೆ
4. ಕರ್ನಾಟಕದ ಒಳನಾಡು ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ಇಂದು ಮಳೆ ಸಾಧ್ಯತೆ- ಹವಾಮಾನ ಇಲಾಖೆ ಮುನ್ಸೂಚನೆ
5. ಚೀನಾ ಮಾಸ್ಟರ್ಸ್ ಬ್ಯಾಡ್ಮಿಂಟನ್: ಡಬಲ್ಸ್ ಫೈನಲ್‌ನಲ್ಲಿ ಇಂದು ಚೀನಾದ ಜೋಡಿ ವಿರುದ್ಧ ಸಾತ್ವಿಕ್ ಸಾಯಿರಾಜ್-ಚಿರಾಗ್ ಶೆಟ್ಟಿ ಸೆಣಸು

<><><><>

ಅಸ್ಸಾಂ, ಮೇಘಾಲಯ, ಮಣಿಪುರ ಮತ್ತು ಅರುಣಾಚಲ ಪ್ರದೇಶಕ್ಕೆ ನಾಲ್ಕು ದಿನಗಳ ಭೇಟಿ ಕೈಗೊಂಡಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಗುವಾಹಟಿಯ ಲೋಕಪ್ರಿಯ ಗೋಪಿನಾಥ್ ಬೊರ್ಡೋಲೊಯಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತಲುಪಿದ್ದಾರೆ. ಅಲ್ಲಿ ಅವರನ್ನು ಅಸ್ಸಾಂ ರಾಜ್ಯಪಾಲ ಲಕ್ಷ್ಮಣ ಪ್ರಸಾದ್ ಆಚಾರ್ಯ, ಮುಖ್ಯಮಂತ್ರಿ ಡಾ.ಹಿಮಂತ ಬಿಸ್ವ ಶರ್ಮಾ ಹಾಗೂ ಇತರ ಗಣ್ಯರು ಅವರನ್ನು ಸ್ವಾಗತಿಸಿದರು. ಅಸ್ಸಾಂ ಪ್ರವಾಸದ ಸಂದರ್ಭದಲ್ಲಿ ಉಪರಾಷ್ಟ್ರಪತಿ ಅವರು ಗೀತಾನಗರ ಕಾಲೇಜು, ಶ್ರೀಮಂತ ಶಂಕರದೇವ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಗೌಹಾಟಿ ವಿಶ್ವವಿದ್ಯಾಲಯಗಳಲ್ಲಿ ಆಯೋಜಿಸಿರುವ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ನಾಳೆ ಅವರು, ಗುವಾಹಟಿ ವಿಶ್ವವಿದ್ಯಾಲಯದಲ್ಲಿ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ವಿಶ್ವವಿದ್ಯಾಲಯದ ಸಮಾವೇಶ

ಕೇಂದ್ರದಲ್ಲಿ ವಿದ್ಯಾರ್ಥಿಗಳು, ಅಧ್ಯಾಪಕರು ಮತ್ತು ನಾಗರಿಕರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ೮ ರಂದು ಉಪರಾಷ್ಟ್ರಪತಿಗಳು, ಇಂಫಾಲ್‌ಗೆ ಭೇಟಿ ನೀಡಲಿದ್ದಾರೆ. ಅವರು ಮೊಯಿರಾಂಗ್‌ನಲ್ಲಿರುವ ಐಎನ್‌ಎ ವಸ್ತುಸಂಗ್ರಹಾಲಯ ಮತ್ತು ಇಂಫಾಲ್‌ನ ಸೈನಿಕ್ ಶಾಲೆಯನ್ನು ಭೇಟಿ ಮಾಡಲಿದ್ದಾರೆ. ನಂತರ ಅವರು ಇಟಾನಗರಕ್ಕೆ ತೆರಳಲಿದ್ದಾರೆ. ತಮ್ಮ ಭೇಟಿಯ ಕೊನೆಯ ದಿನದಂದು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಅರುಣಾಚಲ ಪ್ರದೇಶ ವಿಧಾನಸಭೆಯ ವಿಶೇಷ ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ನೈದಾರ್ ನಾಮ್ಲೋ, ಇಟಾನಗರದ ಜವಾಹರಲಾಲ್ ನೆಹರು ರಾಜ್ಯ ವಸ್ತುಸಂಗ್ರಹಾಲಯ ಹಾಗೂ ಶ್ರವಣ ಮತ್ತು ದೃಷ್ಟಿಹೀನರಿಗಾಗಿ ಸ್ಥಾಪಿಸಿರುವ ಡೊನ್ಯಿ ಪೊಲೊ ಮಿಷನ್ ಶಾಲೆಗೆ ಭೇಟಿ ನೀಡಲಿದ್ದಾರೆ.

<><><><>

ಬಿಹಾರದಲ್ಲಿ ಪ್ರವಾಹ ಪರಿಸ್ಥಿತಿ ಇಂದು ಕೂಡ ಮುಂದುವರೆದಿದ್ದು, ಅನೇಕ ನದಿಗಳಲ್ಲಿ ನೀರಿನ ಮಟ್ಟ ಏರಿಕೆಯಿಂದಾಗಿ ೧೧ ಜಿಲ್ಲೆಗಳಲ್ಲಿ ಸುಮಾರು ೧೯.೮೫ ಲಕ್ಷ ಜನರು ಸಂಕಷ್ಟದಲ್ಲಿದ್ದಾರೆ. ಆದರೆ, ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಆಡಳಿತವು ನಿರಂತರವಾಗಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ನಡೆಸುತ್ತಿದೆ. ಅಧಿಕೃತ ಅಂಕಿ-ಅಂಶಗಳ ಪ್ರಕಾರ, ೧೧ ಜಿಲ್ಲೆಗಳ ೯೧ ಬ್ಲಾಕ್‌ಗಳು ಮತ್ತು ೩೦೦ ಗ್ರಾಮ ಪಂಚಾಯಿತಿಗಳು ಪ್ರವಾಹದಿಂದ ಬಾಧಿತವಾಗಿವೆ. ಸಂತ್ರಸ್ತರಿಗೆ ಆಹಾರ, ಆಶ್ರಯ ಮತ್ತು ಇತರ ಅಗತ್ಯ ನೆರವು ಒದಗಿಸಲು ಪರಿಹಾರ ಕಾರ್ಯಾಚರಣೆಗಳನ್ನು ತೀವ್ರಗೊಳಿಸಲಾಗಿದೆ. ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ ೮೦ ಸಮುದಾಯ ಅಡುಗೆ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಇದುವರೆಗೆ ಸುಮಾರು ೧.೨೧ ಲಕ್ಷ ಮಂದಿಗೆ ಆಹಾರದ ವ್ಯವಸ್ಥೆ ಮಾಡಲಾಗಿದೆ. ಒಂದು ಪರಿಹಾರ ಶಿಬಿರವೂ ಕಾರ್ಯನಿರ್ವಹಿಸುತ್ತಿದ್ದು, ೩೨೯ ಸಂತ್ರಸ್ತರಿಗೆ ವಸತಿ, ಆಹಾರ, ವೈದ್ಯಕೀಯ ನೆರವು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಸಂತ್ರಸ್ತರಿಗೆ ತಕ್ಷಣದ ನೆರವು ನೀಡಲು ಇದುವರೆಗೆ ಸುಮಾರು ೪೫ ಸಾವಿರದ ೬೦೦ ಪಾಲಿಥಿನ್ ಹಾಳೆಗಳು ಮತ್ತು ೧೧ ಸಾವಿರದ ೭೦೦ ಒಣ ಪಡಿತರ ಪೊಟ್ಟಣಗಳನ್ನು ವಿತರಿಸಲಾಗಿದೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಜನರ ಸ್ಥಳಾಂತರ ಹಾಗೂ ಸಂಚಾರಕ್ಕೆ ಅನುಕೂಲವಾಗುವಂತೆ ರಾಜ್ಯಾದ್ಯಂತ ೧ ಸಾವಿರದ ೧೫೮ ದೋಣಿಗಳನ್ನು ಕಾರ್ಯಾಚರಣೆಗೆ ನಿಯೋಜಿಸಲಾಗಿದೆ. ಮುಂಬರುವ ದಿನಗಳಲ್ಲಿ ಪ್ರವಾಹ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯ ಹಿನ್ನೆಲೆಯಲ್ಲಿ ತ್ವರಿತ

ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಲು ವಿವಿಧ ಜಿಲ್ಲೆಗಳಲ್ಲಿ ೨೭ ರಾಜ್ಯ ವಿಪತ್ತು ನಿರ್ವಹಣಾ ಪಡೆ-ಎಸ್‌ಡಿಆರ್‌ಎಫ್ ತಂಡಗಳು ಮತ್ತು ೭ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ-ಎನ್‌ಡಿಆರ್‌ಎಫ್ ತಂಡಗಳನ್ನು ನಿಯೋಜಿಸಲಾಗಿದೆ. ಪ್ರಯಾಗ್‌ರಾಜ್ ಮತ್ತು ವಾರಾಣಸಿಯಲ್ಲಿ ಗಂಗಾ ನದಿಯಲ್ಲಿ ನೀರು ಅಪಾಯ ಮಟ್ಟಕ್ಕಿಂತ ಕೆಳಗಿದೆ. ಮುಂದಿನ ೨ ದಿನಗಳಲ್ಲಿ ರಾಜ್ಯದ ಹಲವು ಭಾಗಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಬಿಹಾರ ಹವಾಮಾನ ಕೇಂದ್ರ ಮುನ್ಸೂಚನೆ ನೀಡಿದೆ. ಕೆಲವು ಪ್ರದೇಶಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯೂ ಇದೆ.

<><><><>

ಇರಾನ್‌ನ ಐಆರ್‌ಜಿಸಿ ನೌಕಾಪಡೆ ಕಾರ್ಯತಂತ್ರದ ಹೋರ್ಮುಜ್ ಜಲಸಂಧಿಯಲ್ಲಿ ಅನುಮತಿಯಿಲ್ಲದ ಮಾರ್ಗದಲ್ಲಿ ಸಂಚರಿಸುತ್ತಿದ್ದ ೩ ತೈಲ ಟ್ಯಾಂಕರ್‌ಗಳು ಹಾಗೂ ಅಮೆರಿಕದೊಂದಿಗೆ ಸಂಪರ್ಕ ಹೊಂದಿವೆ ಎನ್ನಲಾದ ೩ ಹಡಗುಗಳ ಮೇಲೆ ದಾಳಿ ನಡೆಸಿರುವುದಾಗಿ ತಿಳಿಸಿದೆ. ಪರ್ಷಿಯನ್ ಕೊಲ್ಲಿ ಮತ್ತು ಓಮನ್ ಸಮುದ್ರದಲ್ಲಿ ಅಮೆರಿಕವು ಇರಾನ್‌ನ ೩ ತೈಲ ಟ್ಯಾಂಕರ್‌ಗಳ ಮೇಲೆ ದಾಳಿ ನಡೆಸಿದ ಬಳಿಕ ಈ ಬೆಳವಣಿಗೆ ನಡೆದಿದೆ. ಅಮೆರಿಕದ ದಾಳಿಯಿಂದ ಹಡಗುಗಳಿಗೆ ಹಾನಿಯಾಗಿದೆ ಎಂದು ಐಆರ್‌ಜಿಸಿ ತಿಳಿಸಿದ್ದು, ಹೋರ್ಮುಜ್ ಜಲಸಂಧಿಯನ್ನು ಬಂದ್ ಮಾಡುವ ಪ್ರಯತ್ನ ಇದಾಗಿದೆ ಎಂದು ಆರೋಪಿಸಿದೆ. ಜಲಸಂಧಿಯಲ್ಲಿ ಕಾರ್ಯನಿರ್ವಹಿಸುವ ಹಡಗುಗಳು ಅನುಮತಿಯಿಲ್ಲದ ಜಲಮಾರ್ಗಗಳನ್ನು ತಪ್ಪಿಸುವಂತೆ ಎಚ್ಚರಿಸಿದೆ.

<><><><>

ನೇಪಾಳದಲ್ಲಿ ಸಂಭವಿಸಿದ ಹಠಾತ್ ಪ್ರವಾಹದಿಂದ ಮೃತಪಟ್ಟವರ ಸಂಖ್ಯೆ ೧ ಸಾವಿರದ ೩೪೪ಕ್ಕೆ ಏರಿಕೆಯಾಗಿದೆ. ಸುಮಾರು ೫ ಸಾವಿರದ ೫೯೦ ಮಂದಿ ಇನ್ನೂ ನಾಪತ್ತೆಯಾಗಿದ್ದಾರೆ. ಇದುವರೆಗೆ ೧೩ ಸಾವಿರದ ೧೦೦ಕ್ಕೂ ಅಧಿಕ ಮಂದಿಯನ್ನು ರಕ್ಷಿಸಲಾಗಿದೆ. ನುವಾಕೋಟ್ ಜಿಲ್ಲೆಯಲ್ಲಿ ಕೆಸರು ಮತ್ತು ಅವಶೇಷಗಳಡಿ ೧೦ ದಿನಗಳ ಕಾಲ ಸಿಲುಕಿದ್ದ ೬೦ ವರ್ಷದ ಮಹಿಳೆಯೊಬ್ಬರನ್ನು ರಕ್ಷಿಸಲಾಗಿದೆ. ಮೃತದೇಹಗಳ ಗುರುತು ಪತ್ತೆಹಚ್ಚಲು ಅಧಿಕಾರಿಗಳು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಹಲವು ಪ್ರಕರಣಗಳಲ್ಲಿ ಡಿಎನ್‌ಎ ಪರೀಕ್ಷೆ ನಡೆಸಲಾಗುತ್ತಿದೆ. ಅಗತ್ಯ ಗುರುತು ಸಂಗ್ರಹಿಸಿದ ಬಳಿಕ ೨೨೨ ಮಹಿಳೆಯರು, ೩೫೫ ಪುರುಷರು ಹಾಗೂ ೪೫೩ ಅಪರಿಚಿತ ವ್ಯಕ್ತಿಗಳ

ಮೃತದೇಹಗಳನ್ನು ಪೊಲೀಸರು ಸಂರಕ್ಷಿಸಿದ್ದಾರೆ. ಕುಟುಂಬಸ್ಥರು ತಮ್ಮ ಸಂಬಂಧಿಕರನ್ನು ಗುರುತಿಸಲು ನೆರವಾಗುವಂತೆ ೧ ಸಾವಿರದ ೨೭೦ ಅಪರಿಚಿತ ಮೃತದೇಹಗಳ ವಿವರಗಳನ್ನು ನೇಪಾಳ ಪೊಲೀಸ್ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ರಕ್ಷಣಾ ಕಾರ್ಯಾಚರಣೆ, ಪರಿಹಾರ ಸಾಮಗ್ರಿಗಳ ವಿತರಣೆ, ಮೃತದೇಹಗಳ ನಿರ್ವಹಣೆ ಹಾಗೂ ರಸ್ತೆ ತೆರವು ಕಾರ್ಯಗಳಿಗಾಗಿ ಸುಮಾರು ೭ ಸಾವಿರದ ೯೧೨ ಪೊಲೀಸ್ ಸಿಬ್ಬಂದಿಯನ್ನು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ನಿಯೋಜಿಸಲಾಗಿದೆ. ಭಾರತ ಮತ್ತು ಚೀನಾದ ನೆರವಿನೊಂದಿಗೆ ಹಲವು ಜಲವಿದ್ಯುತ್ ಯೋಜನಾ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳು ಮುಂದುವರಿದಿರುವ ಹಿನ್ನೆಲೆಯಲ್ಲಿ ಪ್ರಮುಖ ನದಿಗಳಲ್ಲಿನ ನೀರಿನ ಮಟ್ಟದ ಮೇಲೂ ಅಧಿಕಾರಿಗಳು ತೀವ್ರ ನಿಗಾ ವಹಿಸಿದ್ದಾರೆ.

<><><>

ಬಿಹಾರ, ಪೂರ್ವ ರಾಜಸ್ಥಾನ, ಹರಿಯಾಣ, ಚಂಡೀಗಢ, ದೆಹಲಿ, ಮಧ್ಯಪ್ರದೇಶ, ಉತ್ತರಪ್ರದೇಶ, ಉತ್ತರಾಖಂಡ ಹಾಗೂ ಈಶಾನ್ಯ ರಾಜ್ಯಗಳ ಕೆಲವು ಭಾಗಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಕರ್ನಾಟಕದ ಒಳನಾಡು ಪ್ರದೇಶ ಬಿಹಾರ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಮಧ್ಯಪ್ರದೇಶ, ರಾಜಸ್ಥಾನ, ಪಶ್ಚಿಮ ಬಂಗಾಳ ಹಾಗೂ ಸಿಕ್ಕಿಂನಲ್ಲಿ ಇಂದು ಬಿರುಗಾಳಿ, ಗುಡುಗು, ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ. ತಮಿಳುನಾಡು, ಪುದುಚೇರಿ, ಕಾರೈಕಲ್ ಮತ್ತು ಮೇಘಾಲಯದಲ್ಲೂ ಇಂದು ಇದೇ ರೀತಿಯ ಹವಾಮಾನ ಪರಿಸ್ಥಿತಿ ಮುಂದುವರಿಯುವ ನಿರೀಕ್ಷೆಯಿದೆ ಎಂದು ಇಲಾಖೆ ತಿಳಿಸಿದೆ.

<><><>

ಜಾರ್ಖಂಡ್‌ನ ನಗರಾಭಿವೃದ್ಧಿ ಸಚಿವ ಸುದಿವ್ಯ ಕುಮಾರ್ ಸೋನು ಅವರು ಇಂದು ಹೃದಯಾಘಾತದಿಂದ ನಿಧನರಾಗಿದ್ದಾರೆ. ಮುಖ್ಯಮಂತ್ರಿ ಹೇಮಂತ್ ಸೊರೆನ್, ಸುದಿವ್ಯ ಕುಮಾರ್ ಸೋನು ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದು, ಜಾರ್ಖಂಡ್‌ನ ಅಸ್ಮಿತೆ, ಹಕ್ಕುಗಳು ಮತ್ತು ಹೋರಾಟಕ್ಕೆ ಅವರು ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು ಎಂದು ಹೇಳಿದ್ದಾರೆ.

<><><>

ಮಧ್ಯಪ್ರದೇಶದ ಸಾಗರ್ ಜಿಲ್ಲೆಯ ಬಂಡಾ ತಹಸೀಲಿನಲ್ಲಿ ಶಂಕಿತ ಕಳ್ಳಬಟ್ಟಿ ಮದ್ಯ ಸೇವಿಸಿ ೯ ಮಂದಿ ಮೃತಪಟ್ಟಿದ್ದಾರೆ. ಹತ್ತಕ್ಕೂ ಹೆಚ್ಚು ಮಂದಿ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸಾಗರ್ ಮುಖ್ಯ ವೈದ್ಯಕೀಯ ಮತ್ತು ಆರೋಗ್ಯ ಅಧಿಕಾರಿ ದೇವೇಶ್ ಪಟೇರಿಯಾ ಅವರು ೯ರಿಂದ ೧೦ ಮಂದಿ ಮೃತಪಟ್ಟಿರುವ ಮಾಹಿತಿ ದೊರೆತಿದೆ ಎಂದು ತಿಳಿಸಿದ್ದಾರೆ. ಮೃತರು ಬರಾಜ್ ಗ್ರಾಮದವರು ಎಂದು ವರದಿಯಾಗಿದೆ. ಘಟನೆ ಬಳಿಕ ಪೊಲೀಸರು ಮತ್ತು ಆಡಳಿತಾಧಿಕಾರಿಗಳ ತಂಡ ಸ್ಥಳಕ್ಕೆ ಧಾವಿಸಿದೆ. ಸಾಗರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಸಾವಿಗೆ ನಿಖರ ಕಾರಣ ತನಿಖೆ ಮತ್ತು ಮರಣೋತ್ತರ ಪರೀಕ್ಷೆಯ ವರದಿಗಳ ಬಳಿಕವಷ್ಟೇ ಸ್ಪಷ್ಟವಾಗಲಿದೆ.

<><><><>

ಚೀನಾ ಮಾಸ್ಟರ್ಸ್ ಟೂರ್ನಿಯ ಬ್ಯಾಡ್ಮಿಂಟನ್‌ನ ಡಬಲ್ಸ್ ವಿಭಾಗದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ೩ನೇ ಬಾರಿಗೆ ಫೈನಲ್ ಪ್ರವೇಶಿಸಿದೆ. ಭಾರತದ ಜೋಡಿ, ಫೈನಲ್ ಪಂದ್ಯದಲ್ಲಿಂದು ಚೀನಾದ ಹೀ ಜಿ ಟಿಂಗ್ ಮತ್ತು ರೆನ್ ಕ್ಸಿಯಾಂಗ್ ಯು ಅವರನ್ನು ಎದುರಿಸಲಿದೆ.  ಪಂದ್ಯ ಭಾರತೀಯ ಕಾಲಮಾನ ೧ ಗಂಟೆ ೫೦ ನಿಮಿಷಕ್ಕೆ ಆರಂಭವಾಗಲಿದೆ.

<><><><>

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ದುಲೀಪ್ ಟ್ರೋಫಿ - ೨೦೨೩ರ ಪಂದ್ಯಾವಳಿಯ ಫೈನಲ್‌ನಲ್ಲಿ ಇಂದು ಪೂರ್ವ ವಲಯ ಮತ್ತು ದಕ್ಷಿಣ ವಲಯ ತಂಡಗಳು ಮುಖಾಮುಖಿಯಾಗಿವೆ. ಪಂದ್ಯ ಪ್ರಗತಿಯಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>